## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊಸಕೋಟೆ.

**ದಿನಾಂಕಃ 28.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ನನಗೆ ಒಬ್ಬ ಅಕ್ಕ ಇದ್ದಳು ಎಂದು ಹೇಳಿದ್ದು ಆ ರೀತಿ ಅವರು ಇದ್ದಾರೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಕೊಡಲು ತೊಂದರೆ ಇಲ್ಲ. ಆಕೆ ಮರಣ ಹೊಂದಿದ್ದಾರೆ ಎಂದು ಹೇಳಿದ್ದು ಆ ಬಗ್ಗೆ ಅವರ ಮರಣ ಪ್ರಮಾಣ ಪತ್ರ ಹಾಜರುಪಡಿಸಲು ತೊಂದರೆ ಇಲ್ಲ. ನಿಪಿ-1 ವಂಶವೃಕ್ಷ ನನ್ನ ಹೇಳಿಕೆಯ ಮೇಲೆ ಬರೆಯಲಾಗಿದೆ ಎಂದರೆ ನಿಜ. ನಾನು ಈ ದಾವೆಗಾಗಿ ನಿಪಿ-1 ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಾವು ಒಟ್ಟು ಕುಟುಂಬದಲ್ಲಿ ಇದ್ದೇವೆ ಎಂದು ತೋರಿಸಲು ವಂಶವೃಕ್ಷವನ್ನು ಬಿಟ್ಟು ಬೇರೆ ಯಾವುದೇ ದಾಖಲೆ ನ್ಯಾಯಾಲಯಕ್ಕೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಹನುಮಂತಪ್ಪನವರ ವಾರಸ್ಸುದಾರರು ಎಂದು ತೋರಿಸಲು ತಹಶೀಲ್ದಾರ್ ಕಚೇರಿಯಿಂದ ವಂಶವೃಕ್ಷ ದೃಢೀಕರಣ ಪತ್ರ ಹಾಜರುಪಡಿಸಲು ತೊಂದರೆ ಇಲ್ಲ. ನಾನು ಹನುಮಂತಪ್ಪನವರ ಮಗಳು ಎಂದು ತೋರಿಸಲು ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಆ ರೀತಿ ಯಾವುದೇ ದಾಖಲೆಗಳು ಹಾಜರುಪಡಿಸದೇ ಇದ್ದರೂ ಸಹ ಹಾಜರುಪಡಿಸಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹನುಮಂತಪ್ಪನ ಮಗಳು ಆಗದೇ ಇರುವ ಕಾರಣ ಆ ಬಗ್ಗೆ ನ್ಯಾಯಾಲಯಕ್ಕೆ  ಯಾವುದೇ ದಾಖಲೆಗಳನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಭಾಗ ಕೇಳಿದೆ ಎಂದು ನನ್ನ ವಾದಪತ್ರದ 7 ನೇ ಪ್ಯಾರಾದಲ್ಲಿ ಸುಳ್ಳು ಹೇಳಿ ಬರೆಸಿದ್ದೇನೆ ಎಂದರೆ ಸರಿಯಲ್ಲ. ಭಾಗ ಕೊಡಿ ಎಂದು ನಾನು 1 ನೇ ಪ್ರತಿವಾದಿಗೆ ಕೇಳಿದ್ದೆ. ಹನುಮಂತಪ್ಪ ಮದುವೆಯಾಗಿರಲಿಲ್ಲ ಮತ್ತು ಆತನಿಗೆ ಯಾವುದೇ ಮಕ್ಕಳು ಇರಲಿಲ್ಲ ಎಂದರೆ ಸರಿಯಲ್ಲ. ನಾನು ಹನುಮಂತಪ್ಪನ ಮಗಳು ಎಂದು ತೋರಿಸಲು ಗೇರಳ್ಳಿ ಗ್ರಾಮದವರಿಗೆ ಸಾಕ್ಷಿ ಮಾಡಿಸಲು ತೊಂದರೆ ಇರುವುದಿಲ್ಲ. 1 ನೇ ಪ್ರತಿವಾದಿಗು ನನಗು ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿದ್ದಾರೆ,**

Sd/-
**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಹೊಸಕೋಟೆ.**